# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1212
ಸದಸ್ಯರ ಹೆಸರು : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ
ಉತ್ತರಿಸುವ ಸಚಿವರು : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.
ಉತ್ತರಿಸಬೇಕಾಗಿದ್ದ ದಿನಾಂಕ : 26.02.2018

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಉಡುಪಿ ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; ಅಗತ್ಯ ಮಕ್ಕಳ ಕೊರತೆಯಿಂದ ಮುಚ್ಚುವ ಸ್ಥಿತಿಯಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರ ಮಾಹಿತಿ ನೀಡುವುದು)</td><td>
• ಉಡುಪಿ ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ:1191<br>
• ಮಕ್ಕಳ ಕೊರತೆಯಿಂದ ಮುಚ್ಚುವ ಸ್ಥಿತಿಯಲ್ಲಿ ಯಾವುದೇ ಅಂಗನವಾಡಿ ಕೇಂದ್ರಗಳು ಇರುವುದಿಲ್ಲ.<br>
• ಅಂಗನವಾಡಿ ಕೇಂದ್ರಗಳ ತಾಲ್ಲೂಕುವಾರು ಮಾಹಿತಿ ಈ ಕೆಳಗಿನಂತಿದೆ.
<table>
<tr><th>ತಾಲ್ಲೂಕು</th><th>ಅಂಗನವಾಡಿ ಕೇಂದ್ರಗಳು</th></tr>
<tr><td>ಉಡುಪಿ</td><td>549</td></tr>
<tr><td>ಕುಂದಾಪುರ</td><td>412</td></tr>
<tr><td>ಕಾರ್ಕಳ</td><td>230</td></tr>
<tr><td>ಒಟ್ಟು:</td><td>1191</td></tr>
</table>
</td></tr>
<tr><td>ಆ)</td><td>ಹೊಸ ಅಂಗನವಾಡಿ ಕೇಂದ್ರವನ್ನು ನಿರ್ಮಿಸಲು ಇರುವ ಮಾರ್ಗಸೂಚಿಗಳು ಯಾವುವು; ಉಡುಪಿ ಜಿಲ್ಲೆಯಲ್ಲಿ ಹೊಸ ಅಂಗನವಾಡಿ ಕೇಂದ್ರಗಳ ಸ್ಥಾಪನೆಗೆ ಇಲಾಖೆ ಮುಂದಿರುವ ಪ್ರಸ್ತಾವನೆಗಳ ಸಂಖ್ಯೆ ಎಷ್ಟು; ಉಡುಪಿ ಜಿಲ್ಲೆಯಲ್ಲಿ ಗ್ರಾಮಾಂತರ ಪ್ರದೇಶದಲ್ಲಿ ಮನೆಗಳು ಚದುರಿದಂತೆ ಇರುವುದರಿಂದ ಮಕ್ಕಳ ಸಂಖ್ಯೆಗೆ ರಿಯಾಯಿತಿಯನ್ನು ನೀಡುವ ಉದ್ದೇಶ ಸರ್ಕಾರದ ಮುಂದಿದೆಯೇ;</td><td>ಹೊಸ ಅಂಗನವಾಡಿ ಕೇಂದ್ರವನ್ನು ನಿರ್ಮಿಸಲು ಇರುವ ಮಾರ್ಗಸೂಚಿಗಳ ಪ್ರತಿಯನ್ನು ಲಗತ್ತಿಸಿದೆ.<br><br>
ಉಡುಪಿ ಜಿಲ್ಲೆಯಲ್ಲಿ ಹೊಸ ಅಂಗನವಾಡಿ ಕೇಂದ್ರಗಳ ಸ್ಥಾಪನೆಗೆ ಇಲಾಖೆ ಮುಂದಿರುವ ಪ್ರಸ್ತಾವನೆಗಳ ಸಂಖ್ಯೆ: 11<br>
ಆದರೆ ಕೇಂದ್ರ ಸರ್ಕಾರದ ಪತ್ರ ಸಂ:11/33/ 215ಸಿಡಿ-I, ದಿನಾಂಕ: 06-10-2016ರಲ್ಲಿ ಐಸಿಡಿಎಸ್ ಯೋಜನೆಯ 3ನೇ ಹಂತದ ವಿಸ್ತರಣೆಯಲ್ಲಿ, ಬೇಡಿಕೆಯನ್ವಯ ಹೆಚ್ಚುವರಿ ಅಂಗನವಾಡಿ ಕೇಂದ್ರಗಳನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲವೆಂದು ತಿಳಿಸಿರುತ್ತಾರೆ. ಆದ್ದರಿಂದ ಫಲಾನುಭವಿಗಳ ಲಭ್ಯತೆಯ ಮೇರೆಗೆ ಅಂಗನವಾಡಿ ಕೇಂದ್ರಗಳನ್ನು ಸ್ಥಳಾಂತರ/ವಿಲೀನಗೊಳಿಸಿ ಸದರಿ ಫಲಾನುಭವಿಗಳಿಗೆ ಸೌಲಭ್ಯ ಒದಗಿಸುವಂತೆ ಕ್ರಮ ಜರುಗಿಸಲಾಗುವುದು.</td></tr>
<tr><td>ಇ)</td><td>ಖಾಸಗಿ ನರ್ಸರಿ ಶಾಲೆಗಳನ್ನು ಪ್ರಾರಂಭಿಸಲು ಇರುವ ಮಾರ್ಗಸೂಚಿಗಳು ಯಾವುವು; ಇವುಗಳ ದುಬಾರಿ ಶುಲ್ಕದ ನಿಯಂತ್ರಣದ ಅಗತ್ಯತೆಯನ್ನು ಸರ್ಕಾರದ ಮನ ಗೊಂಡಿದೆಯೇ; ಈ ಬಗ್ಗೆ ಸರ್ಕಾರದ ಕ್ರಮವೇನು?</td><td>- ಅನ್ವಯಿಸುವುದಿಲ್ಲ-</td></tr>
</table>

ಸಂ:ಮಮಇ 106 ಐಸಿಡಿ 2018

(ಡಾ.ಜಯಮಾಲ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು